# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1115 |
| ಸದಸ್ಯರ ಹೆಸರು | ಡಾ|| ಯತೀಂದ್ರ.ಎಸ್ |
| ಉತ್ತರಿಸುವ ದಿನಾಂಕ | 18.12.2024 |
| ಉತ್ತರಿಸುವವರು | ಸಾರಿಗೆ ಮತ್ತು ಮುಜರಾಯಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿಗಳಾದ ಶಕ್ತಿ ಯೋಜನೆ ಮತ್ತು ಗೃಹಲಕ್ಷ್ಮೀ ಯೋಜನೆಗಳಿಂದ ದೇವಸ್ಥಾನಗಳಿಗೆ ಬರುವ ಭಕ್ತಾಧಿಗಳು ಹೆಚ್ಚಾಗಿದ್ದು, ಮೂಲಭೂತ ಸೌಕರ್ಯಗಳ ಮೇಲೆ ಸಾಕಷ್ಟು ಒತ್ತಡ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು(ವಿವರ ಒದಗಿಸುವುದು) | ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿಗಳಾದ ಶಕ್ತಿ ಯೋಜನೆ ಮತ್ತು ಗೃಹಲಕ್ಷ್ಮೀ ಯೋಜನೆಗಳಿಂದ ದೇವಸ್ಥಾನಗಳಿಗೆ ಬರುವ ಭಕ್ತಾಧಿಗಳು ಹೆಚ್ಚಾಗಿದ್ದು, ಧಾರ್ಮಿಕ ದತ್ತಿ ಇಲಾಖೆಯ ದೇವಾಲಯಗಳಲ್ಲಿ ಭಕ್ತಾದಿಗಳಿಗೆ ಈ ಕೆಳಕಂಡ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅಗತ್ಯ ಕ್ರಮವಹಿಸಲಾಗಿರುತ್ತದೆ.<br><br>ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಸುತ್ತೋಲೆ ಸಂಖ್ಯೆ:ಸಿಎನ್‌ಆರ್/1/ಸಿಆರ್/346/2010-11 ದಿ:22.03.2011ರಲ್ಲಿ 32 ಅಂಶಗಳನ್ನು ಒಳಗೊಂಡಂತೆ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ ಹಾಗೂ ಈ ಕೆಳಕಂಡ ಮೂಲಭೂತ ಸೌಕರ್ಯಗಳನ್ನು ಸಹ ಒದಗಿಸಲಾಗಿರುತ್ತದೆ.<br><br>1. ದೇವಾಲಯದಲ್ಲಿ ಮಾರ್ಗದರ್ಶನ ನೀಡುವ ಫಲಕಗಳನ್ನು ಅಳವಡಿಸಲಾಗಿರುತ್ತದೆ.<br>2. ದೇವಾಲಯಕ್ಕೆ ಭೇಟಿ ನೀಡುವ ಹಿರಿಯ ನಾಗರೀಕರು ಮತ್ತು ಕುಟುಂಬಗಳು ವಿಶ್ರಮಿಸಲು ಆಸನದ ವ್ಯವಸ್ಥೆ.<br>3. ದೇವಾಲಯಕ್ಕೆ ಬರುವ ಭಕ್ತಾದಿಗಳಿಗೆ ನೆರಳಿನ ವ್ಯವಸ್ಥೆ.<br>4. ದೇವಾಲಯಗಳಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ (RO Plant) ದಾಸೋಹದ ವ್ಯವಸ್ಥೆ.<br>5. ದಾಸೋಹದ ವ್ಯವಸ್ಥೆ.<br>6. ಶೌಚಾಲಯಗಳ ವ್ಯವಸ್ಥೆ.<br>7. ದೇವಾಲಯಗಳಲಿ CC TV ಗಳ ವ್ಯವಸ್ಥೆ.<br>8. ವಿಶೇಷ ಚೇತನರು ಹಾಗೂ ಹಿರಿಯ ನಾಗರೀಕರಿಗೆ ಪ್ರತ್ಯೇಕ ಸರದಿ ಸಾಲಿನಲ್ಲಿ ನೇರ ದರ್ಶನ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ.<br>9. ಪ್ರವರ್ಗ 'ಎ' ಮತ್ತು 'ಬಿ' ದೇವಾಲಯಗಳಲ್ಲಿ ತಾಯಂದಿರು ಹಾಲುಣಿಸಲು ಪ್ರತ್ಯೇಕ ಕೊಠಡಿ ವ್ಯವಸ್ಥೆ ಹಾಗೂ ಒಂದು ವರ್ಷದೊಳಗಿನ ಚಿಕ್ಕ ಮಕ್ಕಳಿರುವ ತಾಯಂದಿರಿಗೆ ನೇರ ದರ್ಶನದ ವ್ಯವಸ್ಥೆ. |
| ಆ) | ಕೇಂದ್ರ ಸರ್ಕಾರ ಪುರಸ್ಕೃತ ಯೋಜನೆಯಾದ "ಸ್ವದೇಶ್ ದರ್ಶನ್" ಅಡಿ ದೇವಸ್ಥಾನಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ನೀಡಿರುವ ಅನುದಾನವೆಷ್ಟು? (ವರ್ಷವಾರು ವಿವರ ಒದಗಿಸುವದು) | ಧಾರ್ಮಿಕ ದತ್ತಿ ಇಲಾಖೆ ವ್ಯಾಪಿಯಲ್ಲಿ ಬರುವ ದೇವಾಲಯಗಳಲ್ಲಿ "ಸ್ವದೇಶ್ ದರ್ಶನ್" ಎಂಬ ಯೋಜನೆಯನ್ನು ಕೈಗೊಂಡಿರುವುದಿಲ್ಲ.<br><br>ಸ್ವದೇಶ್ ದರ್ಶನ್ ಯೋಜನೆಯು ಪ್ರವಾಸೋದ್ಯಮ ಇಲಾಖೆಗೆ ಸಂಬಂಧಿಸಿರುವುದರಿಂದ ಮುಜರಾಯಿ ಇಲಾಖೆಯಿಂದ ಯಾವುದೇ ಕ್ರಮ ಇರುವುದಿಲ್ಲ. |

ಸಂಖ್ಯೆ: ಕಂಇ 183 ಮುಸಪು 2024

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು